ಇಡಿ/ಕೆಇಎ/ಆಡಳಿತ/ಸಿ.ಆರ್-36/2018-19 ದಿನಾಂಕ: 16-10-2018

ಅಧಿಸೂಚನೆ

ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ
ಸ್ನಾತಕೋತ್ತರ ಕೋರ್ಸುಗಳ ಪ್ರವೇಶ 2018-19 (ಪಿಜಿ)

ದಿನಾಂಕ 21-09-2018ರ ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸಚಿವಾಲಯ ನಿರ್ದೇಶಕರು ನವದೆಹಲಿ ಇವರ ಮಾರ್ಗದರ್ಶಿ ಸೂತ್ರಗಳ ಅನ್ವಯ, ಸರ್ಕಾರವು ತನ್ನ ಆದೇಶ ಸಂಖ್ಯೆ ಆಕುಕ 70 ಪಿಟಿಡಿ 2017 ಬೆಂಗಳೂರು ದಿನಾಂಕ 15-10-2018 ರಲ್ಲಿ, 2018-19ನೇ ಸಾಲಿನ ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ All India Ayush Post Graduate Entrance Test (AIAPGET) ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಅನ್ನು ನಡೆಸಲು ಪ್ರಾಧಿಕಾರಕ್ಕೆ ಆದೇಶಿಸಿದೆ.

AIAPGET -2018 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಂದ ಸರ್ಕಾರವು ನಿಗದಿಪಡಿಸುವ ಸ್ನಾತಕೋತ್ತರ ಆಯುಷ್ ಸೀಟುಗಳ / ಕೋರ್ಸುಗಳ ಪ್ರವೇಶಕ್ಕಾಗಿ ಪ್ರಾಧಿಕಾರವು ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಿದೆ. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು ದಿನಾಂಕ 17-10-2018 ರ ಸಂ.4.00 ರಿಂದ 20-10-2018ರ ಸಂ. 3.00 ರೊಳಗೆ ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅರ್ಜಿಯನ್ನು ಸಲ್ಲಿಸಬೇಕು. ನೊಂದಣಿ ಶುಲ್ಕ, ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಮೂಲ ದಾಖಲಾತಿಗಳನ್ನು ಸಲ್ಲಿಸಬೇಕಾದ ವಿವರಗಳು ಮತ್ತು ಇನ್ನಿತರ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ನೋಡಲು ಸೂಚಿಸಿದೆ.

AIAPGET -2018 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳು ಮತ್ತು ಇತರೆ ಮಾಹಿತಿಗಳನ್ನೂ ಸಹ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. SC/ST/Cat-1/2A/2A/3A/3B ಅರ್ಹತಾ ಮಾನದಂಡಗಳು ಕರ್ನಾಟಕದ ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ ಎಂಬುದನ್ನು ಗಮನಿಸಿ.

ಅಭ್ಯರ್ಥಿಯ ಅರ್ಹತೆಯು ತಾತ್ಕಾಲಿಕವಾಗಿರುತ್ತದೆ ಮತ್ತು AIAPGET -2018 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳಿಗೆ ಒಳಪಟ್ಟಿರುತ್ತದೆ ಹಾಗೆಯೇ ಪ್ರವೇಶವು ಸಂಬಂಧಿಸಿದ CCIM / CCH / ಸರ್ಕಾರ / ಅರ್ಹತಾ ಪ್ರಾಧಿಕಾರ / ವಿಶ್ವ ವಿದ್ಯಾನಿಲಯ ಅನುಮೋದನೆಗೆ ಒಳಪಟ್ಟಿರುತ್ತದೆ. ನೋಂದಣಿ ಮಾಡುವುದರಿಂದಾಗಲೀ ಅಥವಾ ದಾಖಲಾತಿಗಳನ್ನು ಪರಿಶೀಲನೆ ಮಾಡಿಕೊಳ್ಳುವುದರಿಂದಾಗಲೀ ಕರ್ನಾಟಕದ ಆಯುಷ್ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ ಅಭ್ಯರ್ಥಿಗಳು ಯಾವುದೇ ಹಕ್ಕನ್ನು ಪಡೆಯುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು.